# ಬಗರ್ ಹುಕುಂ ಜಮೀನು ಮಂಜೂರಾತಿ ವರದಿ ಸಲ್ಲಿಸಲು ಪ್ರಾದೇಶಿಕ ಆಯುಕ್ತ ಮೇಘಣ್ಣವರ ಸೂಚನೆ



ಬೆಳಗಾವಿ:22- ಬಗರ್ ಹುಕುಂ ಜಮೀನುಗಳ ಮಂಜೂರಾತಿಯಲ್ಲಿ ನಡೆದಿರುವ ಅಕ್ರಮಗಳು ಅಥವಾ ಲೋಪದೋಷಗಳಿಗೆ ಸಂಬಂಧಿಸಿದಂತೆ ಪ್ರಕರಣಗಳ ಕುರಿತು ದಾಖಲೆಗಳನ್ನು ಪರಿಶೀಲಿಸಿ ಸಮಗ್ರ ತನಿಖೆ ಕೈಗೊಂಡು ವರದಿ ಸಲ್ಲಿಸಬೇಕು ಎಂದು ಪ್ರಾದೇಶಿಕ ಆಯುಕ್ತ ಪಿ.ಎ.ಮೇಘಣ್ಣವರ ಸೂಚನೆ ನೀಡಿದರು.

ಭೂ ಕಂದಾಯ ಕಾಯ್ದೆ ಕಲಂ 94 ಎ ಹಾಗೂ 94 ಬಿ ಅಡಿ ಸಲ್ಲಿಕೆಯಾದ ಅರ್ಜಿಗಳ ವಿಲೇವಾರಿ ಮತ್ತು ತಿರಸ್ಕೃತ ಅರ್ಜಿಗಳನ್ನು ಪುನಃ ಪರಿಗಣಿಸಿರುವ ಕುರಿತು ಪ್ರಾದೇಶಿಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಸೋಮವಾರ (ಅ.22) ನಡೆದ ಬೆಳಗಾವಿ ವಿಭಾಗದ ವ್ಯಾಪ್ತಿಯ ಎಲ್ಲ ಜಿಲ್ಲೆಗಳ ಉಪ ವಿಭಾಗಾಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಭಾಗದ ಎಲ್ಲ ತಾಲ್ಲೂಗಳಲ್ಲಿ ಸಲ್ಲಿಕೆಯಾಗಿರುವ ಬಗರ್ ಹುಕುಂ ಸಾಗುವಳಿ ಮಂಜೂರಾತಿ ಪ್ರಕರಣಗಳು ಮತ್ತು ವಿಲೇವಾರಿ ಬಗ್ಗೆ ಅವರು ಮಾಹಿತಿ ಪಡೆದುಕೊಂಡರು.

ಬಗರ್ ಹುಕುಂ ಸಾಗುವಳಿಗೆ ಸಂಬಂಧಿಸಿದ ಅರ್ಜಿಗಳು ತಿರಸ್ಕೃತಗೊಂಡು ಸಮಿತಿಯ ಮುಂದೆ ಪುನಃ ತಂದು ಮಂಜೂರು ಮಾಡಿರುವ ಅರ್ಜಿಗಳ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ಮಂಜೂರಾತಿ ವೇಳೆ ನಡೆದ ಕಾನೂನು ಲೋಪದೋಷಗಳ ಬಗ್ಗೆ ಮರುಪರಿಶೀಲಿಸಿ ವರದಿ ಸಲ್ಲಿಸುವಂತೆ ಉಪ ವಿಭಾಗಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ವಿಭಾಗದಲ್ಲಿ ಒಟ್ಟಾರೆ 3 ಪ್ರಕರಣಗಳಲ್ಲಿ 9.31 ಎಕರೆ ಜಮೀನಿಗೆ ಸಂಬಂಧಿಸಿದಂತೆ ಮಾತ್ರ ಮರು ಪರಿಶೀಲಿಸಿ ಮಂಜೂರಾತಿ ನೀಡಿದ ಪ್ರಕರಣಗಳಿವೆ ಎಂದು ತಿಳಿಸಿದರು.

ತಿರಸ್ಕೃತಗೊಂಡು ಮತ್ತೆ ಮಂಜೂರಾಗಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಂದು ವಾರದೊಳಗೆ ಅಂದರೆ ಅ.27ರೊಳಗೆ ಮರುಪರಿಶೀಲಿಸಿ ವರದಿ ನೀಡುವಂತೆ ಮೇಘಣ್ಣವರ ತಿಳಿಸಿದರು.

ಮಂಜೂರಾಗಿರುವ ಪ್ರಕರಣಗಳಲ್ಲಿ ಇದುವರೆಗೆ ಸಾಗುವಳಿ ಚೀಟಿ ಯಾಕೆ ನೀಡಿಲ್ಲ ಎಂಬುದರ ಬಗ್ಗೆಯೂ ವರದಿ ನೀಡುವಂತೆ ಸೂಚಿಸಿದರು.

ಅದೇ ರೀತಿ 94 ಸಿ ಮತ್ತು 94 ಸಿಸಿ ಪ್ರಕರಣಗಳನ್ನು ನಿಯಮಾನುಸಾರ ತಕ್ಷಣ ವಿಲೇವಾರಿ ಮಾಡಲು ಕ್ರಮಕೈಗೊಳ್ಳಬೇಕು ಎಂದು ಉಪ ವಿಭಾಗಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಳಗಾವಿ ವಿಭಾಗದಲ್ಲಿ 94 ಸಿ ಗೆ ಸಂಬಂಧಿಸಿದಂತೆ ಒಟ್ಟಾರೆ 3094 ಪ್ರಕರಣಗಳು ಬಾಕಿ ಉಳಿದಿವೆ. ಬೆಳಗಾವಿ ಜಿಲ್ಲೆಯಲ್ಲಿ ಅದರಲ್ಲೂ ಚಿಕ್ಕೋಡಿಯಲ್ಲಿ ಹೆಚ್ಚಿನ ಪ್ರಕರಣಗಳು ಬಾಕಿ ಉಳಿದಿವೆ ಎಂದರು.

**ಪಿಂಚಣಿ ಅರ್ಜಿ ತಕ್ಷಣ ಇತ್ಯರ್ಥಕ್ಕೆ ಸೂಚನೆ:**

ಸಾಮಾಜಿಕ ಭದ್ರತಾ ಪಿಂಚಣಿ ಯೋಜನೆಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಆದ್ಯತೆ ಮೇರೆಗೆ ಕಾಲಮಿತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಪ್ರಾದೇಶಿಕ ಆಯುಕ್ತ ಮೇಘಣ್ಣವರ ಸೂಚನೆ ನೀಡಿದರು.

ಪ್ರಸಕ್ತ ವರ್ಷ ಏಪ್ರಿಲ್ 1ರಿಂದ ಇಲ್ಲಿಯವರೆಗೆ ಉಪ ವಿಭಾಗಾಧಿಕಾರಿಗಳು ಹೋಬಳಿ ಮಟ್ಟದಲ್ಲಿ ನಡೆಸಿದ ಲೋಕ ಅದಾಲತ್ ಗಳು, ಅರ್ಜಿ ಸ್ವೀಕಾರ, ಇತ್ಯರ್ಥಪಡಿಸಿದ ಪ್ರಕರಣಗಳು ಮತ್ತು ಬಾಕಿ ಉಳಿದ ಅರ್ಜಿಗಳನ್ನು ಇತ್ಯರ್ಥಪಡಿಸಿದ ವಿವರವನ್ನು ಅ.27ರೊಳಗೆ ವರದಿ ಸಲ್ಲಿಸಬೇಕು ಎಂದು ಹೇಳಿದರು.

ಕರ್ನಾಟಕ ಭೂಸುಧಾರಣಾ ಕಾಯ್ದೆಯ ಸೆಕ್ಷನ್ 79ಎ ಮತ್ತು 79ಬಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾಹಿತಿ ಪಡೆದುಕೊಂಡ ಅವರು, ನಿಯಮಾವಳಿ ಮುಂದಿಟ್ಟುಕೊಂಡು ರೈತರು ಹಾಗೂ ಸಾರ್ವಜನಿಕರಿಗೆ ಶೋಷಣೆ ನಡೆಸುತ್ತಿರುವ ಪ್ರಕರಣಗಳು ಗಮನಕ್ಕೆ ಬಂದಿವೆ. ಆದ್ದರಿಂದ ಈ ಬಗ್ಗೆ ತಹಶೀಲ್ದಾರರು, ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಲೆಕ್ಕಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಉಪ ವಿಭಾಗಾಧಿಕಾರಿಗಳೇ ಮುತುವರ್ಜಿ ವಹಿಸಿ ಪರಿಶೀಲನೆ ನಡೆಸಬೇಕು ಎಂದು ಮೇಘಣ್ಣವರ ಸೂಚನೆ ನೀಡಿದರು.

ಹೊಸ ತಾಲ್ಲೂಕುಗಳ ರಚನೆಯಾಗಿರುವ ಕಡೆಗಳಲ್ಲಿ ಮಿನಿ ವಿಧಾನಸೌಧ ನಿರ್ಮಾಣಕ್ಕೆ ಸ್ಥಳ ಗುರುತಿಸಬೇಕು ಎಂದು ತಿಳಿಸಿದರು.

ಲೋಕೋಪಯೋಗಿ ಇಲಾಖೆಯಿಂದ ವಿನ್ಯಾಸ ಪಡೆದುಕೊಂಡು ಅಂದಾಜು ಪಟ್ಟಿ ಜತೆಗೆ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ವರದಿ ಕಳಿಸಲು ಕ್ರಮಕೈಗೊಳ್ಳಬೇಕು ಎಂದು ಪ್ರಾದೇಶಿಕ ಆಯುಕ್ತರು ತಿಳಿಸಿದರು.

ರೈತರ ಆತ್ಮಹತ್ಯೆ ಪ್ರಕರಣಗಳು ವರದಿಯಾದಾಗ ಕುಟುಂಬಗಳಿಗೆ ಪರಿಹಾರ ನೀಡುವುದು ಮಾತ್ರವಲ್ಲ; ರೈತನ ಕುಟುಂಬಕ್ಕೆ ಪಿಂಚಣಿ ಮತ್ತು ಮಕ್ಕಳ ವಿದ್ಯಾಭ್ಯಾಸಕ್ಕೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಸರ್ಕಾರದ ಆಶಯದಂತೆ ರೈತರ ಕುಟುಂಬದ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದರು.

ಬರಪೀಡಿತ ಎಂದು ಘೋಷಿಸಿರುವ ತಾಲ್ಲೂಕುಗಳಲ್ಲಿ ಕುಡಿಯುವ ನೀರು ಒದಗಿಸಲು ಪರ್ಯಾಯ ಯೋಜನೆ ರೂಪಿಸಬೇಕು. ಜಾನುವಾರುಗಳಿಗೆ ಮೇವು, ಕೆಲಸ ಅರಸಿ ಗುಳೆ ಹೋಗುವ ಜನರಿಗೆ ನರೇಗಾ ಅಡಿ ಕೆಲಸದ ವ್ಯವಸ್ಥೆ ಕಲ್ಪಿಸಬೇಕು.

ಐದು ಹಾಗೂ ಮೂರು ವರ್ಷಕ್ಕಿಂತ ಹಳೆಯದಾಗಿರುವ ಕಂದಾಯ ನ್ಯಾಯಾಲಯದ ಪ್ರಕರಣಗಳನ್ನು ಡಿಸೆಂಬರ್ ಅಂತ್ಯದೊಳಗೆ ವಿಲೇವಾರಿ ಮಾಡಬೇಕು ಎಂದು ತಿಳಿಸಿದರು.

ಪಹಣಿ ಪತ್ರಿಕೆಯ ಕಾಲಂ 3 ಮತ್ತು 9 ರ ಹೊಂದಾಣಿಕೆ ಆಗದಿರುವ ಪ್ರಕರಣಗಳ ವಿಲೇವಾರಿಗೆ ವಿಶೇಷ ಅಭಿಯಾನ ಹಮ್ಮಿಕೊಂಡು ಇತ್ಯರ್ಥಪಡಿಸಬೇಕು ಎಂದು ಹೇಳಿದರು.

ಬಾಕಿ ಇರುವ ಪೋಡಿ ಪ್ರಕರಣಗಳ ಪ್ರಗತಿ, ಕಂದಾಯ ಅದಾಲತ್, ಕಂದಾಯ ಗ್ರಾಮಗಳ ರಚನೆ, ಕಂದಾಯ ನ್ಯಾಯಾಲಯಗಳ ಪ್ರಕರಣಗಳ ವಿಲೇವಾರಿ, ಭೂಮಿ ಬಾಕಿ ವಿವರ ಮತ್ತು ವಕ್ಫ್ ಆಸ್ತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಪ್ರಗತಿಯನ್ನು ಸಭೆಯಲ್ಲಿ ಪರಿಶೀಲಿಸಲಾಯಿತು.

ಅಪರ ಪ್ರಾದೇಶಿಕ ಆಯುಕ್ತ ರಮೇಶ್ ಕಳಸದ, ಬೆಳಗಾವಿ, ಧಾರವಾಡ, ಉತ್ತರ ಕನ್ನಡ, ಗದಗ, ಹಾವೇರಿ, ವಿಜಯಪುರ, ಬಾಗಲಕೋಟೆ ಜಿಲ್ಲೆಯ ಉಪ ವಿಭಾಗಾಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

Scanned by CamScanner